**Bangalore**
**Regional News**
**21.01.2026/2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ಇಂದು ತ್ರಿವಿಧ ದಾಸೋಹಿ ಡಾ. ಶಿವಕುಮಾರ ಸ್ವಾಮೀಜಿ ಪುಣ್ಯಸ್ಮರಣೆ - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಭಾಗಿ
2. ನಾಳೆಯಿಂದ ವಿಧಾನಮಂಡಲ ಜಂಟಿ ಅಧಿವೇಶನ ; ಮನ್ರೇಗಾ ಯೋಜನೆ ಕುರಿತಂತೆ ಚರ್ಚೆ
3. ದಾವೋಸ್ ಸಮ್ಮೇಳನದಲ್ಲಿ ಸ್ಮಾರ್ಟ್ ಇಂಧನ ನಾವೀನ್ಯತೆಯ ಪ್ರಮುಖ ಕೇಂದ್ರವಾಗಿ ಗಮನ ಸೆಳೆದ ಕರ್ನಾಟಕ
4. ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಅಧ್ಯಯನ ರಜೆ ರದ್ದು ; ಸಚಿವ ಮಧುಬಂಗಾರಪ್ಪ ಸಮರ್ಥನೆ
5. ಲಕ್ಕುಂಡಿಯಲ್ಲಿ ಮುಂದುವರಿದೆ ಉತ್ಖನನ ಕಾರ್ಯ ; ಇಂದು ಪಾಣಿಪೀಠ, ನಾಗದೇವರ ಶೀಲಾಮೂರ್ತಿ ಪತ್ತೆ

<><><><>

ನಾಗರಿಕತೆಯ ಬೇರುಗಳನ್ನು ಮತ್ತು ಸಂಸ್ಕೃತಿಯನ್ನು ಗೌರವಿಸುವ ಜೊತೆಗೆ ಅಭಿವೃದ್ಧಿಗೆ ಪೂರಕ ಆಡಳಿತದ ಮಾದರಿಯನ್ನು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಪ್ರತಿಪಾದಿಸಿದ್ದಾರೆ. ಸಿದ್ಧಗಂಗಾ ಮಠದಲ್ಲಿ ಇಂದು ನಡೆದ ತ್ರಿವಿಧ ದಾಸೋಹಿ ಡಾ.ಶಿವಕುಮಾರ ಸ್ವಾಮೀಜಿಗಳ ೭ನೇ ಪುಣ್ಯಸ್ಮರಣೆ ಸಂದರ್ಭದಲ್ಲಿ ಮಾತನಾಡಿದ ಅವರು, ಲೌಖಿಕ ಅಭಿವೃದ್ಧಿಯೊಂದಿಗೆ ಆಧ್ಯಾತ್ಮಿಕವಾಗಿ ನೆಲೆಗೊಂಡಿರುವುದು ಈ ಆಡಳಿತ ಮಾದರಿಯ ಅಡಿಪಾಯವಾಗಿದೆ ಎಂದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ವಿರಾಸತ್ ಅಂದರೆ ಪರಂಪರೆ ಮತ್ತು ವಿಕಾಸ್ ಅಂದರೆ ಅಭಿವೃದ್ಧಿಯ ಸಮತೋಲನವಿರುವ ಆಡಳಿತವನ್ನು ನೀಡುತ್ತಿದ್ದಾರೆ. ಅವರ ಆಡಳಿತದಲ್ಲಿ ಹಿಂದೂ ಜಾಗೃತಿ ಮೂಡಿದ್ದು, ನಮ್ಮ ಪೂರ್ವ ಇತಿಹಾಸ ಮತ್ತು ಮೌಲ್ಯಗಳಿಗೆ ಮಾನ್ಯತೆ ದೊರೆತಿದೆ ಎಂದರು.

**ಧ್ವನಿ : ಸಿ.ಪಿ. ರಾಧಾಕೃಷ್ಣನ್ (೩೦ ಸೆಕೆಂಡ್‌ಗಳು)**

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮಾತನಾಡಿ, ಸಿದ್ಧಗಂಗಾ ಮಠ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ರಂಗದಲ್ಲಿ ಸೇವೆ ಸಲ್ಲಿಸುವ ಮೂಲಕ ಆತ್ಮನಿರ್ಭರವನ್ನು ಸಾಧಿಸಲು ಶ್ರೀ ಶಿವಕುಮಾರ ಸ್ವಾಮೀಜಿಗಳ ದೂರದೃಷ್ಟಿ ಕಾರಣ ಎಂದು ತಿಳಿಸಿದ್ದಾರೆ. ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಾತನಾಡಿ, ಬಸವಣ್ಣನವರು ೧೨ನೇ ಶತಮಾನದಲ್ಲಿ ಪ್ರತಿಪಾದಿಸಿದ ಆಶಯಗಳನ್ನು ಶಿವಕುಮಾರ ಸ್ವಾಮೀಜಿ ಅನುಸರಿಸಿದರು. ನಾವೆಲ್ಲ ಇಂದು ಬಸವಣ್ಣನವರ ಸಮಾನತೆ, ಅಕ್ಷರ, ದಾಸೋಹವನ್ನು ಮುಂದುವರೆಸುವ ಪ್ರತಿಜ್ಞೆ ಕೈಗೊಳ್ಳಬೇಕಿದೆ ಎಂದು ಕರೆ ನೀಡಿದ್ದಾರೆ. ಸಮಾರಂಭದಲ್ಲಿ ಸಚಿವ ವಿ.ಸೋಮಣ್ಣ, ನವದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಸಂಸದರಾದ ಗೋವಿಂದ ಕಾರಜೋಳ, ಡಾ.ಸಿ.ಎನ್.ಮಂಜುನಾಥ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಇದಕ್ಕೂ ಮೊದಲು ಉಪರಾಷ್ಟ್ರಪತಿ ಸೇರಿದಂತೆ ಎಲ್ಲಾ ಗಣ್ಯರು ಶಿವಕುಮಾರ ಸ್ವಾಮಿಗಳ ಗದ್ದುಗೆಯ ದರ್ಶನ ಪಡೆದರು.

<><><><>

ನಾಳೆಯಿಂದ ವಿಧಾನಮಂಡಲ ಜಂಟಿ ಅಧಿವೇಶನ ಆರಂಭವಾಗಲಿದೆ. ಅಧಿವೇಶನದಲ್ಲಿ ಪ್ರಮುಖವಾಗಿ ಮನ್ರೇಗಾ ಯೋಜನೆ ಕುರಿತಂತೆ ವಿಶೇಷ ಚರ್ಚೆ ನಡೆಯಲಿದೆ. ಜಂಟಿ ಅಧಿವೇಶನದ ಮೊದಲ ದಿನವಾದ ನಾಳೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ, ನರೇಗಾ ಯೋಜನೆಯಲ್ಲಿ ಆಗಿರುವ ಬದಲಾವಣೆಗಳು ಅದರ ಅನುಷ್ಠಾನ ಹಾಗೂ ಸವಾಲುಗಳ ಬಗ್ಗೆ ಸದನದಲ್ಲಿ ಸಮಗ್ರ ಚರ್ಚೆ ನಡೆಸಲು ಸರ್ಕಾರ ನಿರ್ಧರಿಸಿದೆ.

<><><>

ದಾವೋಸ್ ೨೦೨೬ರ ವಿಶ್ವ ಆರ್ಥಿಕ ವೇದಿಕೆಯಲ್ಲಿ ಭಾರತದ ಸ್ಮಾರ್ಟ್ ಎನರ್ಜಿ ನವೀನತೆಯ ಪ್ರಮುಖ ಕೇಂದ್ರವಾಗಿ ಕರ್ನಾಟಕ ಗಮನ ಸೆಳೆದಿದೆ. ನಾವೀನ್ಯತೆಯ ಸ್ಮಾರ್ಟ್ ಮೀಟರಿಂಗ್, ಡಿಜಿಟಲ್ ಎನರ್ಜಿ ಪ್ಲಾಟ್‌ಫಾರ್ಮ್‌ಗಳು ಮತ್ತು ಡೈನಾಮಿಕ್ ಟ್ಯಾರಿಫ್ ಮಾದರಿ ಮೂಲಕ ವಿದ್ಯುತ್ ಗ್ರಿಡ್ ದಕ್ಷತೆ, ಬೇಡಿಕೆ-ಪೂರೈಕೆ ನಿರ್ವಹಣೆ ಹಾಗೂ ನವೀಕರಿಸಬಹುದಾದ ಇಂಧನ ಏಕೀಕರಣವನ್ನು ಬಲಪಡಿಸುವ ತಂತ್ರಜ್ಞಾನ ಆಧಾರಿತ ಪರಿಹಾರಗಳಲ್ಲಿ ಜಾಗತಿಕ ಮುಂಚೂಣಿಯಲ್ಲಿರುವ ಆಕ್ಟೋಪಸ್ ಎನರ್ಜಿ ಜೊತೆ ರಾಜ್ಯ ನಿಯೋಗ ಮಾತುಕತೆ ನಡೆಸಿದೆ ಎಂದು ಸಚಿವ ಎಂ.ಬಿ.ಪಾಟೀಲ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಇದು ಸಾಧ್ಯವಾದರೆ ಗ್ರಾಹಕರಿಗೆ ಹೆಚ್ಚಿನ ಮಿತವ್ಯಯದ ಲಾಭ ಸಿಗಲಿದೆ. ಈ ಸಂಬಂಧ ಚರ್ಚಿಸಲು ಬೆಸ್ಕಾಂ ಜತೆ ಮಾತುಕತೆಗೆ ಆಕ್ಟೋಪಸ್ ಎನರ್ಜಿ ಅನುಕೂಲ ಕಲ್ಪಿಸಿಕೊಡುವ ಭರವಸೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಅಧ್ಯಯನ ರಜೆ ರದ್ದು ಮಾಡಿರುವುದನ್ನು ಶಿಕ್ಷಣ ಸಚಿವ ಮಧುಬಂಗಾರಪ್ಪ ಸಮರ್ಥಿಸಿಕೊಂಡಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿದ್ಯಾರ್ಥಿಗಳಿಗಾಗಿ ಕಾಲೇಜಿನಲ್ಲಿ ಉಪನ್ಯಾಸಕರು ಇರುತ್ತಾರೆ. ಜೊತೆಗೆ ಪುನರಾವರ್ತನೆಗೂ ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಬಿಜೆಪಿ ನಾಯಕರು ನಾಳೆ ನಡೆಯುವ ಅಧಿವೇಶನದಲ್ಲಿ ಮನ್ರೇಗಾ ಕುರಿತಂತೆ ಚರ್ಚಿಸಲಿ ಎಂದು ಸವಾಲು ಹಾಕಿದ್ದಾರೆ.

<><><>

ಕರ್ನಾಟಕ ಸುಧಾರಿತ ಹಾಜರಾತಿ ನಿರ್ವಹಣೆ ವ್ಯವಸ್ಥೆ-ಕರ್ತವ್ಯ ರಾಜ್ಯ ಸರ್ಕಾರದ ಏಕೀಕೃತ ಕೃತಕಬುದ್ಧಿಮತ್ತೆ ಮತ್ತು ಚಾಲಿತ ಹಾಜರಾತಿ ನಿರ್ವಹಣಾ ವೇದಿಕೆಯಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಡಿಯಲ್ಲಿ ಈ ಆಡಳಿತ ಕೇಂದ್ರ ಆಂತರಿಕವಾಗಿ ಅಭಿವೃದ್ಧಿಪಡಿಸಿದೆ. ನಿಖರ, ನೈಜ, ಸಮಯ ಮತ್ತು ಸುರಕ್ಷಿತ ಹಾಜರಾತಿ ಡೇಟಾವನ್ನು ಸಾಂಸ್ಥಿಕಗೊಳಿಸುವ ಮೂಲಕ ಇದು ಆಡಳಿತಾತ್ಮಕ ದಕ್ಷತೆಯನ್ನು ಹೆಚ್ಚಿಸಲಿದೆ. ಡಿಜಿಟಲ್ ಆಡಳಿತದಲ್ಲಿ ಮುಂಚೂಣಿಯಲ್ಲಿರುವ ರಾಜ್ಯದ ಹಿರಿಮೆಯನ್ನು ಹೆಚ್ಚಿಸಿದೆ ಎಂದು ಆಡಳಿತ ಸುಧಾರಣಾ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

<><><>

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ಇಂದು ಆರನೇ ದಿನಕ್ಕೆ ಕಾಲಿಟ್ಟಿದೆ. ಲಕ್ಕುಂಡಿಯ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಆರು ಅಡಿಗಳ ಉತ್ಖನನ ಕಾರ್ಯ ಪೂರ್ಣಗೊಂಡಿದೆ. ಕಲ್ಯಾಣ ಚಾಲುಕ್ಯರ ಕಾಲದ ಎಂದು ಹೇಳಲಾಗುತ್ತಿರುವ ಪಾಣಿ ಪೀಠ, ನಾಗದೇವರ ಶಿಲಾ ಮೂರ್ತಿ ಮತ್ತು ಮೂಳೆಗಳು ಇಂದು ಪತ್ತೆಯಾಗಿವೆ. ಪತ್ತೆಯಾದ ಪುರಾತನ ವಸ್ತುಗಳನ್ನು ಪುರಾತತ್ವ ಇಲಾಖೆ ಅಧಿಕಾರಿಗಳು ಸಂರಕ್ಷಣೆ ಮಾಡಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನಲ್ಲಿ ಕೈಗಾರಿಕಾ ತ್ಯಾಜ್ಯಗಳಿಂದಾಗಿ ಕೆಲವು ಗ್ರಾಮಗಳ ಕೆರೆಗಳು ಕಲುಷಿತಗೊಂಡಿರುವ ಬಗ್ಗೆ ಬಂದಿರುವ ದೂರುಗಳು ಹಾಗೂ ವರದಿ ಆಧರಿಸಿ, ಲೋಕಾಯುಕ್ತ ಕಾಯ್ದೆ ಅಡಿ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಳ್ಳಲಾಗಿದೆ. ತ್ಯಾಜ್ಯ ನೀರು ಬಿಡುತ್ತಿರುವವರ ವಿರುದ್ಧ ಕೈಗೊಂಡಿರುವ ಕಾನೂನು ಕ್ರಮಗಳ ಬಗ್ಗೆ ಪೂರಕ ದಾಖಲೆಗಳೊಂದಿಗೆ ಮಾರ್ಚ್ ೯ರಂದು ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ತಿಳಿಸಿದ್ದಾರೆ. ಯಾವುದೇ ಕಾರಣಕ್ಕೂ ಕೈಗಾರಿಕೆಗಳ ತ್ಯಾಜ್ಯ ಕೆರೆಗಳಿಗೆ ಹಾಗೂ ಜಲ ಮೂಲಗಳಿಗೆ ಸೇರದಂತೆ ಕಟ್ಟು ನಿಟ್ಟಿನ ಕ್ರಮ ವಹಿಸಬೇಕು. ನಿರ್ಲಕ್ಷ್ಯ ಕಂಡು ಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಶಾಲಾ ಕಾಲೇಜುಗಳ ಆಸುಪಾಸಿನಲ್ಲಿ ಕಾರ್ಯಾಚರಿಸುವ ಅಂಗಡಿಗಳಲ್ಲಿ ಮಾದಕ ವಸ್ತು ಮತ್ತು ಧೂಮಪಾನ ಮಾರಾಟದ ಬಗ್ಗೆ ನಿರಂತರ ತಪಾಸಣೆ ನಡೆಸುವಂತೆ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ತಿಳಿಸಿದ್ದಾರೆ.

ಕಾಲೇಜುಗಳಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಪೊಲೀಸ್ ಅಧೀಕ್ಷಕ ಡಾ.ಅರುಣ್ ಕೆ ಮಾತನಾಡಿ, ಮಂಗಳೂರು ನಗರದಲ್ಲಿ ಕಳೆದ ಡಿಸೆಂಬರ್ ತಿಂಗಳಲ್ಲಿ ೬೨ ಮಂದಿ ಮಾದಕವಸ್ತು ಸೇವಿಸಿದವರನ್ನು ಹಾಗೂ ೨೧ ಪೆಡ್ಲರ್‌ಗಳನ್ನು ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ರಿಪ್ಪನ್‌ಪೇಟೆ ಸಮೀಪದ ಹರತಾಳು ಗ್ರಾಮದ ಶಶಿಧರ ಭಟ್ಟರ ತೋಟದಲ್ಲಿ ಅಪರೂಪದ ಗರುಡ ಶಿಲ್ಪ ಹೊಂದಿರುವ ಮಾಸ್ತಿಕಲ್ಲು ಪತ್ತೆಯಾಗಿದೆ. ವಿಜಯನಗರ ಕಾಲಘಟ್ಟಕ್ಕೆ ಸೇರಿದ ಈ ಶಾಸನವು ಇತಿಹಾಸ ಹಾಗೂ ಪುರಾತತ್ವದ ದೃಷ್ಟಿಯಿಂದ ಮಹತ್ವ ಪಡೆದಿದೆ. ಈ ಮಾಸ್ತಿಕಲ್ಲಿನ ಮೇಲ್ಭಾಗದಲ್ಲಿ ಪೂರ್ಣ ಕುಂಭ ಶಿಲ್ಪವಿದೆ. ಮೊದಲ ಪಟ್ಟಿಯಲ್ಲಿ ಗರುಡ ಶಿಲ್ಪ ಕೆತ್ತಲಾಗಿದ್ದು, ಎರಡನೇ ಪಟ್ಟಿಯಲ್ಲಿ ಒಬ್ಬ ಪುರುಷ ಮತ್ತು ಮೂವರು ಮಹಿಳೆಯರ ಚಿತ್ರಣ ಇದೆ. ಶಾಸನ ಸಂಶೋಧಕರಾದ ರಮೇಶ್ ಬಿ. ಹಿರೇಜಂಬೂರು ಮಾತನಾಡಿ, ಮಾಸ್ತಿಕಲ್ಲಿನಲ್ಲಿ ಗರುಡ ಶಿಲ್ಪ ಇರುವ ಉದಾಹರಣೆಗಳು ತೀರಾ ವಿರಳವಾಗಿದ್ದು, ಈ ಭಾಗದಲ್ಲಿ ಕಂಡುಬಂದ ಮೊದಲ ಶಾಸನವಾಗಿರಬಹುದು ಎಂದು ಹೇಳಿದ್ದಾರೆ.

<><><><>

ಬಾದಾಮಿಯ ಪಟ್ಟದಕಲ್ಲಿನಲ್ಲಿ ಈಗ ಚಾಲುಕ್ಯ ಉತ್ಸವದ ಸಂಭ್ರಮ. ಎರಡನೇ ದಿನದ ಕಾರ್ಯಕ್ರಮದಲ್ಲಿ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಭಾಗವಹಿಸಿ ಮಾತನಾಡಿ, ಚಾಲುಕ್ಯರ ಶ್ರೀಮಂತ ವಾಸ್ತುಶಿಲ್ಪ, ಕಲೆ, ಸಂಸ್ಕೃತಿ ಹಾಗೂ ಆಡಳಿತ ಪರಂಪರೆಯನ್ನು ಜಾಗೃತಗೊಳಿಸುವ ಉದ್ದೇಶದೊಂದಿಗೆ ಆಯೋಜಿಸಲಾದ ಈ ಮಹಾ ಉತ್ಸವವು ಇತಿಹಾಸ ಪ್ರೇಮಿಗಳಲ್ಲಿ ವಿಶೇಷ ಉತ್ಸಾಹ ಮೂಡಿಸಿದೆ ಎಂದರು. ಪಟ್ಟದಕಲ್ಲು ಯುನೆಸ್ಕೋ ವಿಶ್ವ ಪರಂಪರೆಯ ತಾಣವಾಗಿರುವುದರ ಜೊತೆಗೆ, ಭಾರತದ ಪ್ರಾಚೀನ ಕಲಾವಾಸ್ತುಶಿಲ್ಪದ ಅಮೂಲ್ಯ ನಿಧಿಯಾಗಿದೆ ಎಂದು ಹೇಳಿದರು.

<><><><>

ಬಳ್ಳಾರಿಯಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆಯಿಂದ ಅಕ್ಕ ಪಡೆಯ ವಾಹನಕ್ಕೆ ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ಚಾಲನೆ ನೀಡಿದರು. ಈ ವೇಳೆ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಾಧೀಶ ರಾಜೇಶ್ ಹೊಸಮನಿ, ಮಾತನಾಡಿ. ದೌರ್ಜನ್ಯಕ್ಕೆ ಒಳಗಾಗುವ ಮಹಿಳೆಯರು ಮತ್ತು ಮಕ್ಕಳು ಈ ವಾಹನದ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>